ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಮಸಾಸಂಇ : ಉ ನಿ : ಸುಮಪ : 2019–20 ದಿನಾಂಕ: 06–11–2019

## ಪತ್ರಿಕಾ ಆಮಂತ್ರಣ

1. **The Bharat Scouts and Guides: Foundation Day/Flag Day Programme:**

**Chief Guest:**

**Hon'ble Sri Justice Abhay Shreeniwas Oka,**
**Chief Justice,**
**High Court of Karnataka.**

**Date: 7-11-2019, Thursday Time : 9.30 AM**

**Venue: Kondajji Basappa Auditorium, # 39, Palace Road, (Next to Maharani Science College), Bengaluru-560 001.**

## ಪತ್ರಿಕಾ ಪ್ರಕಟಣೆ

**ಮೆಟ್ರಿಕ್ ನಂತರದ ಶಿಷ್ಯವೇತನ ಮಂಜೂರಾತಿಗಾಗಿ ಏಕೀಕೃತ ರಾಜ್ಯ ಶಿಷ್ಯವೇತನ ತಂತ್ರಾಂಶ ಅಭಿವೃದ್ಧಿ : ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ ನವೆಂಬರ್ 30**

ಬೆಂಗಳೂರು, ನವೆಂಬರ್ 6 ( ಕರ್ನಾಟಕ ವಾರ್ತೆ ) :

ರಾಜ್ಯ ಸರ್ಕಾರದ ವಿವಿಧ ಯೋಜನೆಗಳ ಅಡಿಯಲ್ಲಿ ಮೆಟ್ರಿಕ್ ನಂತರದ ಶಿಷ್ಯವೇತನವನ್ನು ಮಂಜೂರು ಮಾಡಲು ಇ–ಆಡಳಿತ ಕೇಂದ್ರವು ಏಕೀಕೃತ ರಾಜ್ಯ ಶಿಷ್ಯವೇತನ ತಂತ್ರಾಂಶವನ್ನು ಅಭಿವೃದ್ಧಿಪಡಿಸಿದೆ.

ರಾಜ್ಯ ಶಿಷ್ಯವೇತನ ತಂತ್ರಾಂಶವು ವಿದ್ಯಾರ್ಥಿಯ ಆಧಾರ್ ಜೋಡಣೆಗೊಂಡಿರುವ ಬ್ಯಾಂಕ್ ಖಾತೆಗೆ ನೇರ ನಗದು ವರ್ಗಾವಣೆಯನ್ನು ಮಾಡಬಹುದಾಗಿದೆ. ಅಂತೆಯೇ, ಶಿಷ್ಯವೇತನ ಪಡೆಯ ಬಯಸುವ ಅರ್ಹ ಹಾಗೂ ಆಸಕ್ತ ವಿದ್ಯಾರ್ಥಿಗಳು ಏಕೀಕೃತ ರಾಜ್ಯ ಶಿಷ್ಯವೇತನ ತಂತ್ರಾಂಶ **http://ssp.postmatric.karnataka.gov.in** ಮೂಲಕ ನವೆಂಬರ್ **30** ರೊಳಗೆ ಅರ್ಜಿ ಸಲ್ಲಿಸಬಹುದು.

ಇ–ದೃಢೀಕರಣ

ಇ–ದೃಢೀಕರಣ ಎನ್ನುವುದು ಇ–ದೃಢೀಕರಣ ಸಾಫ್ಟ್‌ವೇರ್ ಬಳಸಿ ದೃಢೀಕರಣ ಅಧಿಕಾರಿಗಳಿಂದ ದಾಖಲೆಗಳನ್ನು ದೃಢೀಕರಿಸಿಕೊಳ್ಳುವ ಸುಲಭ ಹಾಗೂ ಪಾರದರ್ಶಕ ವಿಧಾನವಾಗಿದೆ.

ಸಮಾಜ ಕಲ್ಯಾಣ ಇಲಾಖೆ, ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ತಾಂತ್ರಿಕ ಶಿಕ್ಷಣ ಇಲಾಖೆ, ವೈದ್ಯಕೀಯ ಶಿಕ್ಷಣ ಇಲಾಖೆ ಹಾಗೂ ಆಯುಷ್ ಇಲಾಖೆಗಳ ಶಿಷ್ಯ ವೇತನವನ್ನು ಇ–ದೃಢೀಕರಣ ಸಾಫ್ಟ್‌ವೇರ್ ಬಳಸಿ ವಿತರಿಸಬಹುದಾಗಿದೆ.

ಮೆಟ್ರಿಕ್ ನಂತರದ ಶಿಷ್ಯವೇತನಕ್ಕಾಗಿ ಅಧ್ಯಯನ ಅಥವಾ ವಿಶ್ವಾಸಾರ್ಹತಾ ( ಬೊನಾಫೈಡ್ ) ಪ್ರಮಾಣಪತ್ರ. ಶುಲ್ಕ ರಶೀದಿ. ವಸತಿ ಶಾಲಾ ಪ್ರವೇಶಾತಿ ಪ್ರಮಾಣಪತ್ರ. ಅಂಕಪಟ್ಟಿ. ರಕ್ಷಣಾ ಸಿಬ್ಬಂದಿಯ ಮಕ್ಕಳಾದಲ್ಲಿ ರಕ್ಷಣಾ ಸಿಬ್ಬಂದಿ ಸೇವಾ ಪ್ರಮಾಣಪತ್ರ. ಪೋಷಕರ ವೇತನ ಪ್ರಮಾಣಪತ್ರ. ಇವುಗಳಲ್ಲಿ ಯಾವುದಾದರೂ ಒಂದು ಅಥವಾ ಹೆಚ್ಚಿನ ದಾಖಲೆಗಳನ್ನು ಇ–ದೃಢೀಕರಿಸಿಕೊಳ್ಳಬಹುದಾಗಿದೆ. ವಿದ್ಯಾರ್ಥಿಗಳು ತಮ್ಮ ಕೋರ್ಸ್‌ಗೆ ಸಂಬಂಧಿಸಿದಂತೆ ದೃಢೀಕರಿಸಿಕೊಳ್ಳಬೇಕಾದಾಗ ಅಗತ್ಯವಿರುವ ದಾಖಲೆಗಳ ಪಟ್ಟಿಗಾಗಿ ಎಸ್.ಎಸ್.ಪಿ ಪೋರ್ಟಲ್ ಅನ್ನು ಪ್ರವೇಶಿಸಿ ಪರಿಶೀಲಿಸಬಹುದಾಗಿದೆ.

ದಾಖಲೆಗಳನ್ನು ಇ–ದೃಢೀಕರಿಸಿಕೊಳ್ಳುವುದು ಹೇಗೆ ?

ಮೊದಲು **http://ssp.postmatric.karnataka.gov.in** ಗೆ ಭೇಟಿ ನೀಡಿ. ನಂತರ, ಇ–ದೃಢೀಕರಣ (ವಿದ್ಯಾರ್ಥಿಗಳು) ಲಿಂಕ್ ಅನ್ನು ಕ್ಲಿಕ್ ಮಾಡಿ. ತದ ನಂತರ, ತಮ್ಮ ಆಧಾರ್ ವಿವರಗಳನ್ನು ನಮೂದಿಸಿ. ಇದಾದ ನಂತರ, ತಮ್ಮ ಕಾಲೇಜು ಮತ್ತು ಕೋರ್ಸ್ ವಿವರಗಳನ್ನು ಆಯ್ಕೆ ಮಾಡಿ. ವಸತಿ ಶಾಲೆಯ ದಾಖಲೆಗಾಗಿ ತಮ್ಮ ಹಾಸ್ಟೆಲ್ ವಿವರಗಳನ್ನು ನಮೂದಿಸಿ. ದೃಢೀಕರಿಸಬೇಕಾಗಿರುವ ದಾಖಲೆಯ ವಿವರಗಳನ್ನು ನಮೂದಿಸಿ ನಂತರ ಅಪ್‌ಲೋಡ್ ಮಾಡಿ.

ಅಂತೆಯೇ, ಆನ್‌ಲೈನ್ ಅರ್ಜಿಯನ್ನು ಸಲ್ಲಿಸಿದ ನಂತರ ದಾಖಲೆಯ ದೃಢೀಕರಣಕ್ಕಾಗಿ ಮೂಲ ದಾಖಲೆಗಳೊಂದಿಗೆ ಇ–ದೃಢೀಕರಣ ಅಧಿಕಾರಿಯನ್ನು ಭೇಟಿ ಮಾಡಿ. ಪೋರ್ಟಲ್‌ನಲ್ಲಿ ಲಭ್ಯವಿರುವ ನಮೂನೆಯನ್ನು ಡೌನ್‌ಲೋಡ್ ಮಾಡಿಕೊಂಡು .ಸಹಿ ಮಾಡಿದ ಆಧಾರ್ ಅನುಮತಿ ಪತ್ರವನ್ನು ಇ–ದೃಢೀಕರಣ ಅಧಿಕಾರಿಗೆ ಸಲ್ಲಿಸಿ ಖಾಸಗಿ ಅಥವಾ ಕಾಲೇಜು ನಿರ್ವಹಿಸುವ ವಸತಿನಿಲಯಗಳಲ್ಲಿ ಉಳಿದುಕೊಂಡಿರುವ ಅಲ್ಪಸಂಖ್ಯಾತ ಸಮುದಾಯದ ವಿದ್ಯಾರ್ಥಿಗಳು ತಮ್ಮ ವಸತಿನಿಲಯ ಘೋಷಣೆ ಪ್ರಮಾಣಪತ್ರವನ್ನು ಸಂಬಂಧಿಸಿದ ಇ–ದೃಢೀಕರಣ ಅಧಿಕಾರಿಗಳಿಂದ ದೃಢೀಕರಿಸಿಕೊಳ್ಳಬೇಕು.

ಮೆಟ್ರಿಕ್ ನಂತರದ ಶಿಷ್ಯವೇತನಕ್ಕೆ ಯಾರು ಅರ್ಜಿ ಸಲ್ಲಿಸಬಹುದು ?

ಅರ್ಜಿದಾರರು ಕರ್ನಾಟಕದ ನಿವಾಸಿಯಾಗಿರಬೇಕು. ಹತ್ತನೇ ತರಗತಿಯ ನಂತರದ ಕೋರ್ಸ್‌ಗಳಲ್ಲಿ ಅಧ್ಯಯನ ಮಾಡುತ್ತಿರಬೇಕು. ವಿದ್ಯಾರ್ಥಿಯ ಕುಟುಂಬದ ಆದಾಯವು ಅರ್ಹ ಮಿತಿಯಲ್ಲಿರಬೇಕು. ತಾಂತ್ರಿಕ ಶಿಕ್ಷಣದಲ್ಲಿ ಅಧ್ಯಯನ ಮಾಡುತ್ತಿರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಅಲ್ಪಸಂಖ್ಯಾತರು ಅಥವಾ ರಕ್ಷಣಾ ಸಿಬ್ಬಂದಿಯ ಮಕ್ಕಳು ಅರ್ಹತಾ ಮಾನದಂಡಗಳನ್ನು ತಿಳಿಯಲು ಪೋರ್ಟಲ್ ಗೆ ಭೇಟಿ ನೀಡಿ.

ಎಸ್‌ಎಸ್‌ಪಿ ತಂತ್ರಾಂಶದಲ್ಲಿ ಮೆಟ್ರಿಕ್ ನಂತರದ ಶಿಷ್ಯವೇತನಕ್ಕೆ ಅರ್ಜಿ ಸಲ್ಲಿಸುವುದು ಹೇಗೆ ?

ಮೊದಲು **http://ssp.postmatric.karnataka.gov.in** ಗೆ ಭೇಟಿ ನೀಡಿ. ತಮ್ಮ ಆಧಾರ್ ವಿವರಗಳು ಮತ್ತು ಮೊಬೈಲ್ ಸಂಖ್ಯೆಯೊಂದಿಗೆ ತಮ್ಮ ಎಸ್‌ಎಸ್‌ಪಿ ಖಾತೆಯನ್ನು ಸೃಜಿಸಿ. ತಮ್ಮ ಕಾಲೇಜು ಮತ್ತು ಕೋರ್ಸ್ ವಿವರಗಳನ್ನು ಆಯ್ಕೆ ಮಾಡಿ. ತಮ್ಮ ಪೋಷಕರ ಅಥವಾ ಪಾಲಕರ ಆಧಾರ್ ವಿವರಗಳನ್ನು ನಮೂದಿಸಿ. ತಮ್ಮ ಜಾತಿ, ಆದಾಯ ಪ್ರಮಾಣಪತ್ರದ ಆರ್.ಡಿ. ಸಂಖ್ಯೆಗಳನ್ನು ನಮೂದಿಸಿ. ತಮ್ಮ ಇ–ದೃಢೀಕರಿಸಲಾದ ದಾಖಲೆಗಳ ಸಂಖ್ಯೆಯನ್ನು ನಮೂದಿಸಿ. ಬಳಕೆದಾರರ ಕೈಪಿಡಿ, ವಿಡಿಯೋ ಟ್ಯುಟೋರಿಯಲ್ ಮತ್ತು **FAQ** (ಪುನರಾವರ್ತಿತ ಪ್ರಶ್ನೆ) ಗಳಿಗಾಗಿ ಎಸ್‌ಎಸ್‌ಪಿ ಪೋರ್ಟಲ್‌ಗೆ ಭೇಟಿ ನೀಡಬಹುದು.

ದಯವಿಟ್ಟು ಗಮನಿಸಿ:

ತಾವು ಶಿಷ್ಯವೇತನಕ್ಕೆ ಅರ್ಜಿ ಸಲ್ಲಿಸುವ ಮೊದಲು ದಯವಿಟ್ಟು ತಮ್ಮ ದಾಖಲೆಗಳನ್ನು ಇ–ದೃಢೀಕರಿಸಿಕೊಳ್ಳಿ. ಶಿಷ್ಯವೇತನವನ್ನು ಪಡೆಯಲು ನಿಮ್ಮ ಆಧಾರ್ ಸಂಖ್ಯೆಯನ್ನು ನಿಮ್ಮ ಬ್ಯಾಂಕ್ ಖಾತೆಗೆ ಜೋಡಣೆ ಮಾಡಲಾಗಿದೆಯೇ ಎಂದು ಖಚಿತಪಡಿಸಿಕೊಳ್ಳಿ. ಮೆಟ್ರಿಕ್ ನಂತರದ ಶಿಷ್ಯವೇತನಕ್ಕಾಗಿ ಅಲ್ಪಸಂಖ್ಯಾತ ಸಮುದಾಯದ ವಿದ್ಯಾರ್ಥಿಗಳು ಎಸ್.ಎಸ್.ಪಿ ತಂತ್ರಾಂಶದಲ್ಲಿ ಕಡ್ಡಾಯವಾಗಿ ಅರ್ಜಿ ಸಲ್ಲಿಸಬೇಕು. ಎಸ್.ಎಸ್.ಪಿ. ತಂತ್ರಾಂಶದಲ್ಲಿ ಅರ್ಜಿ ಸಲ್ಲಿಸುವ ಮೊದಲು ಕಡ್ಡಾಯವಾಗಿ ರಾಷ್ಟ್ರೀಯ ಶಿಷ್ಯವೇತನ ಪೋರ್ಟಲ್ ( ನ್ಯಾಷನಲ್ ಸ್ಕಾಲರ್‌ಷಿಪ್ ಪೋರ್ಟಲ್ ) ನಲ್ಲಿ ಅರ್ಜಿ ಸಲ್ಲಿಸಿ, ಅಲ್ಲಿ ಸ್ವೀಕೃತವಾಗುವ ಗುರುತಿನ ಸಂಖ್ಯೆಯನ್ನು ಎಸ್.ಎಸ್.ಪಿ. ತಂತ್ರಾಂಶದಲ್ಲಿ ನಮೂದಿಸಬೇಕು.

ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಈಗಾಗಲೇ ಇ–ಪಾಸ್ ತಂತ್ರಾಂಶದಲ್ಲಿ ಅರ್ಜಿ ಸಲ್ಲಿಸಿರುವುದರಿಂದ **2019–20** ನೇ ಸಾಲಿನಲ್ಲಿ ಎಸ್.ಎಸ್.ಪಿ ತಂತ್ರಾಂಶದಲ್ಲಿ ಅರ್ಜಿ ಸಲ್ಲಿಸುವ ಅವಕಾಶವಿರುವುದಿಲ್ಲ. ಇ–ಪಾಸ್ ಪೋರ್ಟಲ್ ನಲ್ಲಿ ಅರ್ಜಿ ಸಲ್ಲಿಸದ ವಿದ್ಯಾರ್ಥಿಗಳು ಮೆಟ್ರಿಕ್ ನಂತರದ ಶಿಷ್ಯವೇತನದ ಆಕಾಂಕ್ಷಿಗಳಾಗಿದ್ದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯನ್ನು ಸಂಪರ್ಕಿಸಬಹುದು. ಪದವಿಪೂರ್ವ ಪರೀಕ್ಷೆ, ಕೈಗಾರಿಕಾ ತರಬೇತಿ ಸಂಸ್ಥೆ, ಡಿಪ್ಲೋಮಾ ಇನ್ ಎಜುಕೇಷನ್, ಡಿಪ್ಲೋಮಾ ಇನ್ ಫಾರ್ಮಸಿ, ಎಎನ್‌ಎಂ, ಜಿಎನ್‌ಎಂ, ಪ್ಯಾರಾಮೆಡಿಕಲ್, ಪಾಲಿಟೆಕ್ನಿಕ್ ಮತ್ತು ಜಿಟಿಟಿಸಿ ಕೋರ್ಸುಗಳ ವಿದ್ಯಾರ್ಥಿಗಳು ಖಾಸಗಿ ವಸತಿನಿಲಯ ಪ್ರಮಾಣಪತ್ರ (ಖಾಸಗಿ ಹಾಸ್ಟೆಲ್‌ನಲ್ಲಿ ವಾಸಿಸುತ್ತಿರುವವರಿಗೆ ಮಾತ್ರ) ಹೊರತುಪಡಿಸಿ ಬೇರೆ ಇ–ದೃಢೀಕೃತ ದಾಖಲೆಗಳನ್ನು ಸಲ್ಲಿಸುವ ಅಗತ್ಯವಿಲ್ಲ.

ಕಳೆದ ವರ್ಷ ರಾಜ್ಯ ಸರ್ಕಾರದ ಶಿಷ್ಯವೇತನ ಪಡೆದ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಅಲ್ಪಸಂಖ್ಯಾತ ಸಮುದಾಯಕ್ಕೆ ಸೇರಿದ ವಿದ್ಯಾರ್ಥಿಗಳು ಈ ವರ್ಷ ಎಸ್‌ಎಸ್‌ಪಿ ಪೋರ್ಟಲ್‌ನಲ್ಲಿ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ವಿವರಗಳಿಗಾಗಿ ಸಹಾಯವಾಣಿ ಸಂಖ್ಯೆ: **080 – 4455 4455** ಸಂಪರ್ಕಿಸಬಹುದು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

*******

ಡಿ ಪಿ ಎಂ

## ದೇಶದ ಆರ್ಥಿಕ ವಸ್ತುಸ್ಥಿತಿ ಅರಿಯಲು ಆರ್ಥಿಕ ಗಣತಿ ಅತಿಮುಖ್ಯ – ಮುಖ್ಯಮಂತ್ರಿ ಬಿ. ಎಸ್. ಯಡಿಯೂರಪ್ಪ

ಬೆಂಗಳೂರು, ನವೆಂಬರ್ 6 (ಕರ್ನಾಟಕ ವಾರ್ತೆ)

ದೇಶದ ಆರ್ಥಿಕ ವಸ್ತುಸ್ಥಿತಿ ಅರಿಯಲು ಆರ್ಥಿಕ ಗಣತಿ ಪ್ರಮುಖ ಪಾತ್ರವಹಿಸಲಿದೆ ಎಂದು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು ತಿಳಿಸಿದರು.

ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಇಂದು ಏರ್ಪಡಿಸಿದ್ದ ಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಹಮ್ಮಿಕೊಂಡಿದ್ದ 7 ನೇ ಆರ್ಥಿಕ ಗಣತಿ ಕಾರ್ಯಕ್ಕೆ ಚಾಲನೆ ನೀಡಿ ಮಾತನಾಡಿದ ಮುಖ್ಯಮಂತ್ರಿ ಅವರು ಸರ್ಕಾರದ ಯೋಜನೆ ಹಾಗೂ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಆರ್ಥಿಕ ಗಣತಿ ದಿಕ್ಸೂಚಿ ಆಗಿದೆ ಎಂದರು.

ಪ್ರಥಮ ಬಾರಿಗೆ 7ನೇ ಆರ್ಥಿಕ ಗಣತಿಯನ್ನು ಮೊಬೈಲ್ ಆಪ್ ಮೂಲಕ ಸಂಗ್ರಹಿಸುತ್ತಿರುವುದು ಪ್ರಶಂಸನೀಯ. ಈ ವ್ಯವಸ್ಥೆಯಿಂದ ಮಾಹಿತಿಗಳನ್ನು ಅತಿ ಶೀಘ್ರವಾಗಿ ಸಂಗ್ರಹಿಸುವುದರ ಮೂಲಕ ವರದಿ ತಯಾರಿಸುವುದು ಸೇರಿದಂತೆ ಮಾಹಿತಿಯು ಹೆಚ್ಚು ನಿಖರವಾಗಿರುತ್ತದೆ ಎಂದು ಮುಖ್ಯಮಂತ್ರಿ ಅವರು ತಿಳಿಸಿದರು.

ರಾಜ್ಯದಲ್ಲಿನ ವಿವಿಧ ಭಾಗಗಳಲ್ಲಿರುವ ಉದ್ದಿಮೆಗಳು ಯಾವ ರೀತಿ ಆರ್ಥಿಕ ಚಟುವಟಿಕೆಗಳನ್ನು ಕೈಗೊಳ್ಳುತ್ತಿವೆ ಎಂಬ ಮಾಹಿತಿಯು ಈ ಗಣತಿಯಿಂದ ದೊರೆಯುತ್ತದೆ ಎಂದು ತಿಳಿಸಿದ ಮುಖ್ಯಮಂತ್ರಿ ಅವರು ನಿಖರ ಮಾಹಿತಿಗಳನ್ನು ಸಂಗ್ರಹಿಸುವ ಮೂಲಕ ರಾಜ್ಯದಲ್ಲಿ ಹೊಸ ನೀತಿ ರೂಪಿಸಲು ಸಹಕಾರಿಯಾಗಲಿದೆ ಎಂದು ತಿಳಿಸಿದರು.

ಗಣತಿ ಪಡೆಯಲು ತಮ್ಮ ಮನೆ ಬಾಗಿಲಿಗೆ ಬರುವ ಗಣತಿದಾರರಿಗೆ ಸಂಪೂರ್ಣ ಮಾಹಿತಿಗಳನ್ನು ಮನೆಯ ಹಿರಿಯರು ನೀಡಬೇಕು ಎಂದು ಮನವಿ ಮಾಡಿದ ಮುಖ್ಯಮಂತ್ರಿ ಅವರು ಗಣತಿ ಕಾರ್ಯದಲ್ಲಿ ತೊಡಗಿಸಿಕೊಳ್ಳುವ ಗಣತಿದಾರರು ಸಹ ನಿಖರ ಮಾಹಿತಿ ಪಡೆಯಬೇಕು ಎಂದು ತಿಳಿಸಿದರು.

ಆರ್ಥಿಕ ಗಣತಿಯಿಂದ ಬರುವ ಮಾಹಿತಿಗಳು ರಾಜ್ಯದಲ್ಲಿ ಯೋಜನೆ ರೂಪಿಸಲು ಸಹಕಾರಿಯಾಗಲಿದೆ ಎಂದು ಸಭೆಯಲ್ಲಿ ಉಪಸ್ಥಿತರಿದ್ದ ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಟಿ. ಎಂ. ವಿಜಯಭಾಸ್ಕರ್ ಅವರು ರಾಜ್ಯದ ಈ ಗಣತಿ ಕಾರ್ಯಕ್ಕೆ ಸಹಕರಿಸಬೇಕು ಎಂದು ತಿಳಿಸಿದರು.

7ನೇ ಆರ್ಥಿಕ ಗಣತಿ ಕಾರ್ಯವು ನವೆಂಬರ್ 15 ರಿಂದ ಪ್ರಾರಂಭವಾಗಿ 2020 ರ ಮಾರ್ಚ್‌ವರೆಗೆ ನಡೆಯಲಿದೆ ಎಂದು ಯೋಜನೆ ಮತ್ತು ಸಾಂಖ್ಯಿಕ ಇಲಾಖೆಯ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಶ್ರೀಮತಿ ಎ. ಮಂಜುಳ ಅವರು ತಿಳಿಸಿದರು. ಅಲ್ಲದೆ ನಗರ ಪ್ರದೇಶದಲ್ಲಿ 54,96,473 ಹಾಗೂ ಗ್ರಾಮಾಂತರ ಪ್ರದೇಶಗಳಲ್ಲಿ 82,24,143 ಕುಟುಂಬಗಳನ್ನು ಭೇಟಿಮಾಡಿ ಮಾಹಿತಿ ಸಂಗ್ರಹಿಸಲಾಗುವುದು ಎಂದು ತಿಳಿಸಿದರು.

ರಾಜ್ಯ ಯೋಜನಾ ಆಯೋಗದ ಉಪಾಧ್ಯಕ್ಷರಾದ ಬಿ. ಜೆ. ಪುಟ್ಟಸ್ವಾಮಿ, ಸಾಂಖ್ಯಿಕ ಹಾಗೂ ಕಾರ್ಯಕ್ರಮ ಅನುಷ್ಠಾನ ಮಹಾನಿರ್ದೇಶಕ ವಿಜಯ್‌ಕುಮಾರ್, ಮುಖ್ಯಮಂತ್ರಿ ಸಲಹೆಗಾರರಾದ ಶ್ರೀ ಲಕ್ಷ್ಮೀನಾರಾಯಣ ಸೇರಿದಂತೆ ಸರ್ಕಾರದ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

## ಜೀವರಕ್ಷಕ (ಲೈಫ್‌ಗಾರ್ಡ್) ತರಬೇತಿ ಕಾರ್ಯಕ್ರಮ

ಬೆಂಗಳೂರು, ನವೆಂಬರ್ 6 (ಕರ್ನಾಟಕ ವಾರ್ತೆ)

2019–20 ನೇ ಸಾಲಿನಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ವಿಶೇಷ ಘಟಕ ಮತ್ತು ಗಿರಿಜನ ಘಟಕ ಮತ್ತು ಗಿರಿಜನ ಉಪಯೋಜನೆ ಅಡಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಯುವಜನರಿಗೆ ಜೀವರಕ್ಷಕ (ಲೈಫ್ ಗಾರ್ಡ್) ತರಬೇತಿಯನ್ನು ಆಯೋಜಿಸಲು ಉದ್ದೇಶಿಸಲಾಗಿದೆ.

8 ದಿನಗಳ ತರಬೇತಿ ಕಾರ್ಯಕ್ರಮವನ್ನು 2019 ರ ಡಿಸೆಂಬರ್ ಮಾಹೆಯಲ್ಲಿ ಇಲಾಖೆಯ ಈಜುಕೊಳಗಳಲ್ಲಿ (ಬೆಂಗಳೂರು/ಮೈಸೂರು/ಬಳ್ಳಾರಿ/ಕಲಬುರಗಿ) ಆಯೋಜಿಸಲಾಗಿದೆ.

ಈ ಕಾರ್ಯಕ್ರಮಕ್ಕೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಆಸಕ್ತ ಯುವಕ /ಯುವತಿಯರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ನವೆಂಬರ್ 20 ಕೊನೆಯ ದಿನಾಂಕವಾಗಿದ್ದು, ಕಾರ್ಯಕ್ರಮಕ್ಕೆ ಸಂಬಂಧಿಸಿದ ಅರ್ಜಿಗಳನ್ನು ಸಂಬಂಧಪಟ್ಟ ಜಿಲ್ಲೆಯ ಉಪ/ಸಹಾಯಕ ನಿರ್ದೇಶಕರ ಕಚೇರಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಇವರಿಂದ ಪಡೆದು ಸಲ್ಲಿಸಬಹುದಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ವೆಬ್‌ಸೈಟ್ www.karnataka.gov.in/dyes ಅನ್ನು ಸಂಪರ್ಕಿಸಬಹುದಾಗಿದೆ.

## ಏಕಸದಸ್ಯ ಆಯೋಗದ ರಚನೆ

ಬೆಂಗಳೂರು, ನವೆಂಬರ್ ೬, (ಕರ್ನಾಟಕ ವಾರ್ತೆ)

ಪರಿಶಿಷ್ಟ ಜಾತಿ/ಪಂಗಡದ ಜನಸಂಖ್ಯೆಗೆ ಅನುಗುಣವಾಗಿ ಈಗಿರುವ ಮೀಸಲಾತಿಯನ್ನು ಹೆಚ್ಚಿಸುವ ಕುರಿತು ವರದಿ ನೀಡಲು ಕರ್ನಾಟಕ ಉಚ್ಛ ನ್ಯಾಯಾಲಯದ ನಿವೃತ್ತ ನ್ಯಾಯಮೂರ್ತಿ ಶ್ರೀ ಹೆಚ್.ಎನ್. ನಾಗಮೋಹನ್ ದಾಸ್ ರವರ ಅಧ್ಯಕ್ಷತೆಯಲ್ಲಿ ಏಕ ಸದಸ್ಯ ಆಯೋಗವನ್ನು ರಚಿಸಿದೆ.

ಮೊದಲ ಸಭೆಯು ನವೆಂಬರ್ ೪ ರಂದು ಬೆಳಿಗ್ಗೆ ೧೧.೦೦ ಗಂಟೆಗೆ ಯವನಿಕಾದ ಸಮಾಜ ಕಲ್ಯಾಣ ಇಲಾಖೆಯ ಕಲ್ಯಾಣ ಕೇಂದ್ರದಲ್ಲಿನ ಸಭಾಂಗಣದಲ್ಲಿ ಕರ್ನಾಟಕ ಉಚ್ಛ ನ್ಯಾಯಾಲಯದ ನಿವೃತ್ತ ನ್ಯಾಯಮೂರ್ತಿ ಶ್ರೀ ಹೆಚ್.ಎನ್. ನಾಗಮೋಹನ್ ದಾಸ್ ರವರ ಅಧ್ಯಕ್ಷತೆಯಲ್ಲಿ ನಡೆಯಿತು.

ಇದೇ ಸಂದರ್ಭದಲ್ಲಿ ನವೆಂಬರ್ ೧೩ ರಂದು ಮಧ್ಯಾಹ್ನ ೨.೦೦ ಗಂಟೆಗೆ ಮುಂದಿನ ಸಭೆಯನ್ನು ನಡೆಸುವಂತೆ ತೀರ್ಮಾನಿಸಲಾಯಿತು.

## ಸಚಿವರ ಪ್ರವಾಸ

ಬೆಂಗಳೂರು, ನವೆಂಬರ್ ೬, (ಕರ್ನಾಟಕ ವಾರ್ತೆ)

ವಸತಿ, ತೋಟಗಾರಿಕೆ ಮತ್ತು ರೇಷ್ಮೆ ಸಚಿವ ಹಾಗೂ ಮೈಸೂರು ಮತ್ತು ಕೊಡಗು ಜಿಲ್ಲಾ ಉಸ್ತುವಾರಿ ಸಚಿವರೂ ಆದ ಶ್ರೀ ವಿ. ಸೋಮಣ್ಣ ಅವರು ನವೆಂಬರ್ ೮ ರಂದು ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು, ಅದೇ ದಿನ ನಗರಕ್ಕೆ ಹಿಂದಿರುಗಲಿದ್ದಾರೆ.

## ಅಹವಾಲು ಮನವಿ ಸಲ್ಲಿಸಲು ಅವಕಾಶ

ಬೆಂಗಳೂರು, ನವೆಂಬರ್ 6, (ಕರ್ನಾಟಕ ವಾರ್ತೆ)

ಕರ್ನಾಟಕ ಸರ್ಕಾರವು ನ್ಯಾಯಮೂರ್ತಿ ಎಚ್.ಎನ್. ನಾಗಮೋಹನದಾಸ್ ಅವರ ಅಧ್ಯಕ್ಷತೆಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಜನಸಂಖ್ಯೆಗೆ ಅನುಗುಣವಾಗಿ ಶಿಕ್ಷಣ ಮತ್ತು ಸರ್ಕಾರಿ/ಸಾರ್ವಜನಿಕ ಉದ್ಯೋಗಗಳಿಗೆ ಈಗಿರುವ ಮೀಸಲಾತಿ ಪ್ರಮಾಣವನ್ನು ಹೆಚ್ಚಿಸುವ ಕುರಿತು ವರದಿಯನ್ನು ನೀಡುವಂತೆ ಆಯೋಗವನ್ನು ರಚಿಸಿದೆ.

ಈ ವಿಷಯದಲ್ಲಿ ಆಸಕ್ತಿಯಿರುವ ಸಾರ್ವಜನಿಕರು, ಸಂಬಂಧಿಸಿದ ಸಮುದಾಯಗಳು, ಸಂಘ-ಸಂಘಟನೆಗಳು-ಸಂಸ್ಥೆಗಳು, ವಿದ್ವಾಂಸರು, ಸಾಮಾಜಿಕ ಕಾರ್ಯಕರ್ತರು, ಇತರೆ ಯಾರೂ ಕೂಡ ಆಯೋಗಹಕ್ಕೆ ಮನವಿ/ಅಹವಾಲುಗಳನ್ನು ವರದಿಗಳನ್ನು ಬೇಡಿಕೆಗಳನ್ನು ಲಿಖಿತ ರೂಪದಲ್ಲಿ ಸಲ್ಲಿಸಬಹುದು. ತಮ್ಮ ಮನವಿಗಳು ಆಯೋಗದ ವಿಷಯಕ್ಕೆ ಮಾತ್ರ ಸಂಬಂಧಿಸಿರಬೇಕು ಮತ್ತು ಅವು ಸಾಧ್ಯವಾದಷ್ಟು ಸಂಕ್ಷಿಪ್ತವಾಗಿರಬೇಕು. ಈ ಮನವಿಗಳನ್ನು 2019 ಡಿಸೆಂಬರ್ 10 ರ ಒಳಗೆ ಆಯೋಗಕ್ಕೆ ನೀಡಿರುವ ವಿಳಾಸಕ್ಕೆ ಅಂಚೆಯ ಮೂಲಕ ಅಥವಾ ಖುದ್ದಾಗಿ ತಲುಪಿಸಬಹುದು. ಈ ಮೂಲಕ ಆಯೋಗಕ್ಕೆ ನೆರವಾಗಲು ಪ್ರಕಟಣೆ ತಿಳಿಸಿದೆ.